3. ಇತರೇ ಸಿಬ್ಬಂದಿಗಳು - 4

ಇ) ಖಾಲಿಯಿರುವ ವೈದ್ಯರ ಹುದ್ದೆಯನ್ನು ಸಾಮಾನ್ಯ ವರ್ಗಾವಣೆ 1998ರ ಸಮಯದಲ್ಲಿ ಭರ್ತಿ ಮಾಡಲಾಗುವುದು. ಸಿಬ್ಬಂದಿವರ್ಗದ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲಾಗುವುದು ಹಾಗೂ ಸಾಮಾನ್ಯ ವರ್ಗಾವಣೆಯ ಸಮಯದಲ್ಲಿ ಭರ್ತಿ ಮಾಡಲಾಗುವುದು.

ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸ ನಿರ್ವಹಿಸುತ್ತಿರುವುದು.

666- ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರಿ ವೈದ್ಯರು ಖಾಸಗೀ ನರ್ಸಿಂಗ್ ಹೋಂಗಳಲ್ಲಿ ಕೆಲಸ ನಿರ್ವಹಿಸುತ್ತಿರುವುದರಿಂದ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ತೊಂದರೆಯಾಗುತ್ತಿರುವ ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರಿ ವೈದ್ಯರು ಖಾಸಗಿ ನರ್ಸಿಂಗ್‌ಹೋಂಗಳಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ನಿಷೇಧಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು?*

ಇ) *ಖಾಸಗೀ ನರ್ಸಿಂಗ್‌ಹೋಂಗಳ ಸಿಯಂತ್ರಣದ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಡಾ|| ಹೆಚ್ ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿರುವುದಿಲ್ಲ

ಆ) ಈ ಬಗ್ಗೆ ಸರ್ಕಾರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ನಿಬಂಧನೆ) ಮಸೂದೆ ಒಂದನ್ನು ತರಲು ಉದ್ದೇಶಿಸಿದ್ದು ಅದು ಪರಿಶೀಲನೆಯಲ್ಲಿರುತ್ತದೆ.

ಇ) ಮೇಲಿನಂತೆ.

ಸರ್ಕಾರಿ ವೈದ್ಯಕೀಯ ಶಿಕ್ಷಣ ಕಾಲೇಜುಗಳಲ್ಲಿ ಅಧ್ಯಾಪಕರ ಕೊರತೆ

667 - ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸರ್ಕಾರಿ ಮೆಡಿಕಲ್ ಹಾಗೂ ಡೆಂಟಲ್ ಕಾಲೇಜುಗಳಲ್ಲಿ ಅಧ್ಯಾಪಕರ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸದರಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಕಾಲೇಜುವಾರು, ಹುದ್ದೆವಾರು ವಿವರ ನೀಡುವುದು)*

ಇ) *ಇವುಗಳನ್ನು ತುರ್ತು ಭರ್ತಿ ಮಾಡಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಈ) ಅಧ್ಯಾಪಕರ ಹಾಗೂ ಸೌಲಭ್ಯಗಳ ಕೊರತೆಯ ಕಾರಣಗಳಿಂದಾಗಿ ಸರ್ಕಾರಿ ಕಾಲೇಜುಗಳಲ್ಲಿ ಪ್ರವೇಶಾವಕಾಶವನ್ನು ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಎಷ್ಟು ಕಡಿಮೆ ಮಾಡಲಾಗಿದೆ (ಕಾಲೇಜುಗಳ ವಿವರ ನೀಡುವುದು)

ಡಾ|| ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಹೌದು.

ಆ) ಖಾಲಿ ಇರುವ ಹುದ್ದೆಗಳ ಸಂಖ್ಯೆ

ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು.

1.	ಪ್ರಾಧ್ಯಾಪಕರು	-	2
2.	ಸಹಾಯಕ ಪ್ರಾಧ್ಯಾಪಕರು	-	9
3.	ಉಪನ್ಯಾಸಕರು	-	55

ಮೈಸೂರು ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು

1.	ಪ್ರಾಧ್ಯಾಪಕರು	-	13
2.	ಸಹಾಯಕ ಪ್ರಾಧ್ಯಾಪಕರು	-	19
3.	ಉಪನ್ಯಾಸಕರು	-	53

ಸರ್ಕಾರಿ ದಂತ ಮಹಾವಿದ್ಯಾಲಯ, ಬೆಂಗಳೂರು.

1.	ಪ್ರಾಧ್ಯಾಪಕರು	-	4
2.	ಸಹಾಯಕ ಪ್ರಾಧ್ಯಾಪಕರು	-	2
3.	ಉಪನ್ಯಾಸಕರು	-	3

ಇ) ಈ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ವ್ಯಾಪ್ತಿಯಿಂದ ಹೊರತೆಗೆದು ಇಲಾಖಾ ನೇಮಕಾತಿ ಸಮಿತಿಯ ಮೂಲಕ ತುಂಬುವ ಬಗ್ಗೆ ತೀವ್ರತರವಾಗಿ ಪರಿಶೀಲಿಸಲಾಗುತ್ತಿದೆ.

ಈ) ಹೌದು. ಈ ಕೆಳಕಂಡಂತೆ ಪ್ರವೇಶಾವಕಾಶವನ್ನು ಕಡಿಮೆ ಮಾಡಿರುತ್ತಾರೆ.

ಕ್ರ. ಸಂ.	ವೈದ್ಯಕೀಯ ಮಹಾವಿದ್ಯಾಲಯ	ಕಡಿಮೆ ಮಾಡಿರುವ ಸಂಖ್ಯೆ	1997-98 ರಲ್ಲಿ ನಿಗಧಿ ಪ್ರವೇಶ ಪಡೆದಿರುವವರ ಸಂಖ್ಯೆ
1.	ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ	95	150

2.	ಮೈಸೂರು ವೈದ್ಯಕೀಯ ಮಹಾವಿದ್ಯಾಲಯ	105	100
3.	ಸರ್ಕಾರಿ ವೈದ್ಯಕೀಯ ವಿದ್ಯಾಲಯ, ಬಳ್ಳಾರಿ	40	100
4.	ಕರ್ನಾಟಕ ವೈದ್ಯಕೀಯ ವಿದ್ಯಾಲಯ, ಹುಬ್ಬಳ್ಳಿ	97	50
5.	ಸರ್ಕಾರಿ ದಂತ ಮಹಾವಿದ್ಯಾಲಯ ಬೆಂಗಳೂರು.	10	60

ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡ

669 - ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಉಪಕೇಂದ್ರಗಳಿವೆ?

ಆ) ಇವುಗಳಲ್ಲಿ ಎಷ್ಟು ಆಸ್ಪತ್ರೆಗಳಿಗೆ ಸ್ವತಃ ಕಟ್ಟಡಗಳಿವೆ.

ಇ) ಸ್ವತಃ ಕಟ್ಟಡಗಳನ್ನು ಇಲ್ಲದಿದ್ದರೆ ಅವುಗಳನ್ನು ನಿರ್ವಹಿಸಲು ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಒಟ್ಟು 1601 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 242 ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ 8143 ಉಪ ಕೇಂದ್ರಗಳು ಇರುತ್ತವೆ.

ಆ) ಸ್ವಂತ ಕಟ್ಟಡ ಇರುವ ಆಸ್ಪತ್ರೆಗಳ ವಿವರ :

1.	ಪ್ರಾ. ಆ. ಕೇಂದ್ರ	-	867
2.	ಸಮುದಾಯ ಆರೋಗ್ಯ ಕೇಂದ್ರ	-	109
3.	ಉಪ ಕೇಂದ್ರಗಳು	-	2959

ಇ) ವಿಶ್ವಬ್ಯಾಂಕ್ ನೆರವಿನ ಯೋಜನೆ ಅಡಿಯಲ್ಲಿ ಹಾಗೂ ಆಯಾಯಾ ಜಿಲ್ಲಾ ಪಂಚಾಯತ್‌ನಲ್ಲಿನ ಆಯವ್ಯಯದಲ್ಲಿನ ಅನುದಾನ ಲಭ್ಯತೆ ಮೇರೆಗೆ ಮುಂಬರುವ ಸಾಲುಗಳಲ್ಲಿ ಕಟ್ಟಡ ಕಾಮಗಾರಿ ಕೈಗೊಳ್ಳಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.